ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

18

ಇಲಾಖೆ / ವಿಷಯ : DEPARTMENT / SUBJECT: ಪ್ರಧಾನಮಂತ್ರಿ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE : 10/7/20

# ಭಾರತದ ಪಾತ್ರ ಹಿರಿದು

ಉದಯ 10/7/20

## ಗ್ಲೋಬಲ್ ವೀಕ್ 2020 ಸಮ್ಮೇಳನದಲ್ಲಿ ಪ್ರಧಾನಿ ಮೋದಿ

**ನವದೆಹಲಿ:** ಕೊರೊನಾದಿಂದಾಗಿ ಕುಸಿದಿರುವ ಜಾಗತಿಕ ಆರ್ಥಿಕತೆಯ ಪುನರುತ್ಥಾನದಲ್ಲಿ ಭಾರತದ ಪಾತ್ರ ಮಹತ್ವದ್ದಾಗಿದೆಯಲ್ಲದೆ, ಈ ಸಾಂಕ್ರಾಮಿಕ ಸಂದರ್ಭದಲ್ಲಿ ಭಾರತದ ಔಷಧ ವಿಜ್ಞಾನದ ತಾಕತ್ತೇನೆಂಬುದು ಜಗತ್ತಿಗೇ ಗೊತ್ತಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

ಸುಮಾರು 5,000 ಪ್ರತಿನಿಧಿಗಳು ಭಾಗವಹಿಸಿರುವ ಅಂತಾರಾಷ್ಟ್ರೀಯ ಮಟ್ಟದ ಇಂಡಿಯಾ ಗ್ಲೋಬಲ್ ವೀಕ್ 2020 ಸಮ್ಮೇಳನವನ್ನು ಉದ್ಘಾಟಿಸಿ ಮಾತನಾಡಿದ ಅವರು, ಜಾಗತಿಕ ಮಾರುಕಟ್ಟೆಯಲ್ಲಿ ಭಾರತವೂ ದೈತ್ಯ ಶಕ್ತಿಯಾಗಿರುವುದರಿಂದ ಇಂಥ ಸಂದರ್ಭದಲ್ಲಿ ವಿಶ್ವದ ಆರ್ಥಿಕ ಪರಿಸ್ಥಿತಿಯ ಪುನರುತ್ಥಾನವನ್ನು ಭಾರತಕ್ಕೆ ಥಳುಕು ಹಾಕುವುದು ಔಚಿತ್ಯವಾಗಿದೆ. ಈ ಸಾಂಕ್ರಾಮಿಕ ಕಾಲಘಟ್ಟವು, ಭಾರತದ ಫಾರ್ಮಸಿ ಕ್ಷೇತ್ರದ ಶಕ್ತಿಯನ್ನು ಇಡೀ ವಿಶ್ವಕ್ಕೇ ಮನದಟ್ಟು ಮಾಡಿಕೊಟ್ಟಿದೆ. ಕಡಿಮೆ ಬೆಲೆಯಲ್ಲಿ ಪರಿಣಾಮಕಾರಿಯಾದ ಔಷಧಗಳನ್ನು ತಯಾರಿಸುವ ಬಗೆಯನ್ನು ವಿಶ್ವಕ್ಕೆ ತೋರಿಸಿಕೊಡುವ ಮೂಲಕ, ಅಭಿವೃದ್ಧಿಶೀಲ ರಾಷ್ಟ್ರಗಳಿಗೆ ಹೊಸ ದಿಕ್ಕನ್ನು ತೋರಿಸಿಕೊಟ್ಟಿದೆ ಎಂದು ಅವರು ತಿಳಿಸಿದ್ದಾರೆ.

ಇದೇ ವೇಳೆ, ಭಾರತದ ಪ್ರತಿಭೆಗಳ ಮಹತ್ವವನ್ನು ಕೊಂಡಾಡಿದ ಅವರು, ಭಾರತೀಯ ತಂತ್ರಜ್ಞಾನ ಕ್ಷೇತ್ರವನ್ನಾಗಲೀ, ತಂತ್ರಜ್ಞರನ್ನಾಗಲೀ ವಿಶ್ವದ ಯಾವುದೇ ದೇಶವಾದರೂ ಮರೆಯಲು ಸಾಧ್ಯವೇ? ದಶಕಗಳಿಂದ ಭಾರತೀಯ ತಂತ್ರಜ್ಞರು ಜಾಗತಿಕ ತಂತ್ರಜ್ಞಾನ ರಂಗದಲ್ಲಿ ತಮ್ಮದೇ ಆದ ಹೆಗ್ಗುರುತನ್ನು ಸ್ಥಾಪಿಸಿದ್ದಾರೆ. ಭಾರತವು ಅಂಥ ಅಗಾಧ ಪ್ರತಿಭೆಗಳ ಮಹಾ ಭಂಡಾರವಾಗಿದ್ದು, ಜಗತ್ತಿಗೆ ಅತ್ಯುತ್ತಮ ತಂತ್ರಜ್ಞಾನಿಗಳನ್ನು ನೀಡುತ್ತಾ ಬಂದಿದೆ ಎಂದು ತಿಳಿಸಿದ್ದಾರೆ.



ಯಾವುದೇ ಬಾಹ್ಯ ಬೆಂಬಲವಿಲ್ಲದೆ ಸಮಸ್ಯೆಗಳನ್ನು ಪರಿಹರಿಸಿಕೊಳ್ಳುವ ಛಾತಿಯನ್ನು ಭಾರತೀಯರು ಅನಾದಿ ಕಾಲದಿಂದಲೂ ರೂಢಿಸಿಕೊಂಡು ಬಂದಿದ್ದಾರೆ. ಈಗ ಸಾಮಾಜಿಕ-ಆರ್ಥಿಕ ಸಮಸ್ಯೆ ಎದುರಾಗಿದೆ. ಜಾಗತಿಕ ಮಟ್ಟದಲ್ಲಿ ಹರಡಿರುವ ಈ ಪಿಡುಗು ಈಗ ನಮ್ಮ ದೇಶವನ್ನೂ ಹೊಕ್ಕಿದೆ. ಜನರ ಆರೋಗ್ಯವನ್ನು ಕಾಪಾಡುತ್ತಲೇ ನಾವು ದೇಶದ ಆರ್ಥಿಕ ಆರೋಗ್ಯ ವೃದ್ಧಿಗೂ ಶ್ರಮಿಸಬೇಕಿದೆ ಎಂದು ಅವರು ತಿಳಿಸಿದ್ದಾರೆ.

### ಹೂಡಿಕೆಗೆ ಆಹ್ವಾನ

ಭಾರತದಲ್ಲಿ ಹೂಡಿಕೆ ಮಾಡುವ ಸುವರ್ಣಾವಕಾಶವು ತೆರೆದುಕೊಂಡಿದ್ದು, ವಿಶ್ವದ ಎಲ್ಲಾ ಹೂಡಿಕೆದಾರರಿಗೆ ಭಾರತ, ರತ್ನಗಂಬಳಿಯನ್ನು ಹಾಸಿ, ಸ್ವಾಗತಿಸುತ್ತಿದೆ. ಹೂಡಿಕೆ ಮಾಡಲು ಭಾರತ ನೀಡುವಷ್ಟು ಅನುಕೂಲ ಹಾಗೂ ಅವಕಾಶಗಳನ್ನು ವಿಶ್ವದ ಯಾವುದೇ ರಾಷ್ಟ್ರ ನೀಡುತ್ತಿಲ್ಲ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಕಳೆದ ಆರು ವರ್ಷಗಳಲ್ಲಿ ದೇಶದಲ್ಲಿ ಉದ್ಯಮಶೀಲತೆಯನ್ನು ಹೆಚ್ಚಿಸಲು ಬೇಕಾದ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗಿದೆ. ಅದರ ಜೊತೆಗೆ, ಮೂಲಸೌಕರ್ಯಗಳ ಅಭಿವೃದ್ಧಿ, ಉದ್ಯಮ ಸ್ನೇಹಿ ವಾತಾವರಣ (ಈಸ್ ಆಫ್ ಡೂಯಿಂಗ್ ಬ್ಯುಸಿನೆಸ್), ತೆರಿಗೆಗಳಲ್ಲಿ ಗಣನೀಯ ಸುಧಾರಣೆ.... ಇವೇ ಮುಂತಾದ ಕ್ರಮಗಳನ್ನು ಜಾರಿಗೊಳಿಸಲಾಗಿದೆ.

ಇತ್ತೀಚೆಗೆ, ಸಾಂಕ್ರಾಮಿಕ ವಾತಾವರಣದಿಂದಾಗಿ ಕಂಗೆಟ್ಟಿದ್ದ ಭಾರತೀಯ ಕೈಗಾರಿಕೆಗಳಿಗೆ ಪುನಶ್ಚೇತನ ನೀಡುವ ಉದ್ದೇಶದಿಂದ, ದೇಶದ ಸೂಕ್ಷ್ಮ, ಸಣ್ಣ ಹಾಗೂ ಮಧ್ಯಮ ಕೈಗಾರಿಕೆಗಳಿಗೆ (ಎಂಎಸ್ಎಂಇ) ಸೂಕ್ತವಾದ ಪ್ಯಾಕೇಜುಗಳನ್ನು ಸರ್ಕಾರ ಪ್ರಕಟಿಸಿದೆ. ಇದಲ್ಲದೆ, ರಕ್ಷಣಾ ಕ್ಷೇತ್ರದಲ್ಲಿ ವಿದೇಶಿ ನೇರ ಬಂಡವಾಳ ಹೂಡಿಕೆಯ ಪ್ರಮಾಣವನ್ನು ಹೆಚ್ಚಿಸಲಾಗಿದೆ.